ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**03.03.2026 1.10 pm**

**<>><><*><><<>**

ಮುಖ್ಯಾಂಶಗಳು

**೧. ಪ್ರಸಕ್ತ ಕೇಂದ್ರ ಆಯ-ವ್ಯಯದಲ್ಲಿ ಸುಸ್ಥಿರ ಆರ್ಥಿಕ ಬೆಳವಣಿಗೆಗೆ ಒತ್ತು - ವೆಬಿನಾರ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಅಭಿಮತ**

**೨. ಓಮಾನ್, ಮಸ್ಕಟ್, ದುಬೈ, ಅಬುದಾಬಿಯಿಂದ ವಿಮಾನ ಕಾರ್ಯಾಚರಣೆ ಪುನರಾರಂಭ ; ತಾಯ್ನಾಡಿಗೆ ಸುರಕ್ಷಿತವಾಗಿ ಮರಳಿದ ನೂರಾರು ಭಾರತೀಯರು**

**೩. ಅಫ್ಘಾನಿಸ್ತಾನ್-ಪಾಕಿಸ್ತಾನ್ ಸಂಘರ್ಷ ; ಅಫ್ಘಾನ್ ಪಡೆಗಳಿಂದ ಪಾಕಿಸ್ತಾನದ ಪ್ರಮುಖ ಸೇನಾ ನೆಲೆಗಳ ವಶ**

**೪. ಪೌರತ್ವ ತಿದ್ದುಪಡಿ ಕಾಯ್ದೆ-ಸಿಎಎ ಅರ್ಜಿ ತ್ವರಿತ ವಿಲೇವಾರಿಗೆ ಪಶ್ಚಿಮ ಬಂಗಾಳದಲ್ಲಿ ೨ ಸಬಲೀಕರಣ ಸಮಿತಿ ರಚನೆ**

**<>><><*><><<>**

ಜಾಗತಿಕ ಪೂರೈಕೆ ಸರಪಳಿಗಳು ಮರುರೂಪುಗೊಳ್ಳುತ್ತಿರುವ ಈ ಸಂದರ್ಭದಲ್ಲಿ, ಸ್ವಚ್ಛ ಮತ್ತು ಹಸಿರು ಇಂಧನ ಕ್ಷೇತ್ರದಲ್ಲಿ ಹೂಡಿಕೆ ಮಾಡುವ ಭಾರತೀಯ ಕಂಪನಿಗಳು ಜಾಗತಿಕವಾಗಿ ಉತ್ತಮ ಮಾರುಕಟ್ಟೆಗಳನ್ನು ತಲುಪಲು ಸಾಧ್ಯವಾಗಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ನವದೆಹಲಿಯಲ್ಲಿಂದು ಆಯೋಜಿಸಲಾಗಿದ್ದ ಬಜೆಟ್ ನಂತರದ ವೆಬಿನಾರ್ ಉದ್ದೇಶಿಸಿ ಮಾತನಾಡಿದ ಅವರು, ಪ್ರಸಕ್ತ ವರ್ಷದ ಕೇಂದ್ರ ಬಜೆಟ್ ಆರ್ಥಿಕ ಬೆಳವಣಿಗೆಯನ್ನು ಸುಸ್ಥಿರಗೊಳಿಸುವ ಮತ್ತು ಬಲಪಡಿಸುವ ಬದ್ಧತೆಯನ್ನು ಪುನರುಚ್ಚರಿಸಿದೆ ಎಂದು ಹೇಳಿದರು. ಸುಸ್ಥಿರತೆ ಮತ್ತು ಇಂಗಾಲ ತಡೆಗಟ್ಟುವ ಯೋಜನೆಗಳು ದೇಶದ ಪ್ರಮುಖ ಕ್ರಮಗಳಾಗಿದ್ದು, ಕೈಗಾರಿಕೆಗಳು ತಮ್ಮ ವ್ಯವಹಾರದ ಕಾರ್ಯತಂತ್ರದ ಭಾಗವಾಗಿ ಸುಸ್ಥಿರತೆಯನ್ನು ಅಳವಡಿಸಿಕೊಳ್ಳಬೇಕು ಎಂದು ಪ್ರಧಾನಿ ಕರೆ ನೀಡಿದ್ದಾರೆ. 'ವಿಕಸಿತ ಭಾರತ'ದತ್ತ ಭಾರತೀಯ ಆರ್ಥಿಕತೆಯು ವೇಗವಾಗಿ ಬೆಳೆಯುತ್ತಿದ್ದು, ಹೆಚ್ಚು ಉತ್ಪಾದಿಸುವುದು ಹಾಗೂ ರಫ್ತು ಮಾಡುವುದು ನಮ್ಮ ಸಂಕಲ್ಪವಾಗಿದೆ. ಈ ಗುರಿ ತಲುಪಲು ಕೈಗಾರಿಕೆಗಳು ಮತ್ತು ಹೂಡಿಕೆದಾರರು ಸರ್ಕಾರದೊಂದಿಗೆ ಕೈಜೋಡಿಸುವಂತೆ ಅವರು ಮನವಿ ಮಾಡಿದರು. ನವ ಮತ್ತು ನವೀಕರಿಸಬಹುದಾದ ಇಂಧನ ಸಚಿವಾಲಯಕ್ಕೆ ಈ ಬಾರಿ ಬಜೆಟ್‌ನಲ್ಲಿ ದಾಖಲೆಯ ೩೨ ಸಾವಿರದ ೯೧೪ ಕೋಟಿ ರೂಪಾಯಿಗಳನ್ನು ಮೀಸಲಿಡಲಾಗಿದ್ದು, ಇದರಲ್ಲಿ ೨೨ ಸಾವಿರ ಕೋಟಿ ರೂಪಾಯಿಗಳನ್ನು 'ಪಿಎಂ ಸೂರ್ಯ ಘರ್ ಯೋಜನೆ'ಗೆ ನೀಡಲಾಗಿದೆ. ಹಸಿರು ಇಂಧನ

ಕಾರಿಡಾರ್ ಯೋಜನೆಗೆ ೬೦೦ ಕೋಟಿ ರೂಪಾಯಿ ಹಾಗೂ ರಾಷ್ಟ್ರೀಯ ಹಸಿರು ಹೈಡ್ರೋಜನ್ ಮಿಷನ್‌ಗೆ ೬೦೦ ಕೋಟಿ ರೂಪಾಯಿಗಳ ಅನುದಾನವನ್ನು ಕಲ್ಪಿಸಲಾಗಿದೆ. ಉತ್ಪಾದನೆ, ಸರಕು, ಎಂಎಸ್‌ಎಂಇ ಮತ್ತು ಸಣ್ಣ ಪಟ್ಟಣಗಳು ಭಾರತದ ಬೆಳವಣಿಗೆಯ ಪ್ರಮುಖ ಆಧಾರಸ್ತಂಭಗಳಾಗಿವೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು.

**ಧ್ವನಿ : ಪ್ರಧಾನಿ ನರೇಂದ್ರ ಮೋದಿ (೨೮ ಸೆಕೆಂಡ್‌ಗಳು)**

**<>><><*><><<>**

ಪ್ರಧಾನಿ ನರೇಂದ್ರ ಮೋದಿ, ಯೂಟ್ಯೂಬ್‌ನಲ್ಲಿ ೩೦ ದಶಲಕ್ಷ ಸಬ್‌ಸ್ಕ್ರೈಬರ್ಸ್‌ಗಳನ್ನು ಹೊಂದುವ ಮೂಲಕ ಈ ವಿಡಿಯೋ ಹಂಚಿಕೆ ವೇದಿಕೆಯಲ್ಲಿ ಅತಿ ಹೆಚ್ಚು ಸಬ್‌ಸ್ಕ್ರೈಬರ್ಸ್‌ಗಳನ್ನು ಹೊಂದಿರುವ ಜಾಗತಿಕ ನಾಯಕರಾಗಿ ಹೊರಹೊಮ್ಮಿದ್ದಾರೆ.

**<>><><*><><<>**

ದುಬೈ ಮತ್ತು ಅಬುದಾಬಿಯಿಂದ ಭಾರತಕ್ಕೆ ವಿಮಾನ ಸಂಚಾರ ಕಾರ್ಯಾಚರಣೆ ನಿನ್ನೆ ರಾತ್ರಿಯಿಂದ ಪುನರಾರಂಭವಾಗಿದೆ. ಪಶ್ಚಿಮ ಏಷ್ಯಾ ಪ್ರದೇಶದಲ್ಲಿನ ಸಂಘರ್ಷದಿಂದಾಗಿ ಯುಎಇಯಲ್ಲಿ ಸಿಲುಕಿರುವ ಸಾವಿರಾರು ಭಾರತೀಯರಿಗೆ ಇದೊಂದು ದೊಡ್ಡ ಪರಿಹಾರವಾಗಿದೆ. ಮಸ್ಕಟ್ ಮತ್ತು ಓಮನ್‌ನಲ್ಲಿ ಸಿಲುಕಿದ್ದ ಭಾರತೀಯರು ಇಂದು ಸುರಕ್ಷಿತವಾಗಿ ತಾಯ್ನಾಡಿಗೆ ಮರಳಿದ್ದಾರೆ. ಹಲವು ದಿನಗಳ ಸ್ಥಗಿತದ ಬಳಿಕ ದೆಹಲಿ, ಮುಂಬೈ ಮತ್ತು ಬೆಂಗಳೂರಿಗೆ ವಿಮಾನ ಹಾರಾಟ ಪ್ರಾರಂಭವಾಗಿದ್ದು, ವಿವಿಧ ನಗರಗಳಿಗೆ ಬಂದಿಳಿದ ನೂರಾರು ಪ್ರಯಾಣಿಕರು, ಈ ಕಠಿಣ ಪರಿಸ್ಥಿತಿಯನ್ನು ಸಮರ್ಥವಾಗಿ ನಿಭಾಯಿಸಿದ ಅಧಿಕಾರಿಗಳ ಕಾರ್ಯವೈಖರಿಗೆ ಕೃತಜ್ಞತೆ ಸಲ್ಲಿಸಿದ್ದಾರೆ. ಇಸ್ರೇಲ್-ಇರಾನ್ ಸಂಘರ್ಷದಿಂದಾಗಿ ಅಬುದಾಬಿಯಲ್ಲಿ ಸಿಲುಕಿದ್ದ ೧೦೦ಕ್ಕೂ ಅಧಿಕ ಕನ್ನಡಿಗರು ವಿಮಾನ ಸೇವೆ ಪುನರಾರಂಭಗೊಂಡ ಬೆನ್ನಲ್ಲೆ ನಿನ್ನೆ ರಾತ್ರಿ ೧೦ ಗಂಟೆಗೆ ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಬಂದಿಳಿದಿದ್ದಾರೆ. ದುಬೈ ವಿಮಾನ ನಿಲ್ದಾಣಗಳು ನಿನ್ನೆ ಸಂಜೆ ವಿಮಾನ ಕಾರ್ಯಾಚರಣೆಗಳನ್ನು ಸೀಮಿತವಾಗಿ ಪುನರಾರಂಭಿಸಿರುವುದನ್ನು ದೃಢಪಡಿಸಿವೆ ಎಂದು ದುಬೈ ಮಾಧ್ಯಮ ಕಚೇರಿ ತಿಳಿಸಿದೆ.

**<>><><*><><<>**

ಅಫ್ಘಾನಿಸ್ತಾನ್-ಪಾಕಿಸ್ತಾನ್ ನಡುವಿನ ಡುರಾಂಡ್ ಲೈನ್ ಗಡಿಯಲ್ಲಿ ಸಂಘರ್ಷ ತೀವ್ರಗೊಂಡಿದ್ದು, ಅಫ್ಘಾನ್ ಪಡೆಗಳು ಪಾಕಿಸ್ತಾನದ ಪ್ರಮುಖ ಸೇನಾ ನೆಲೆಗಳನ್ನು ವಶಪಡಿಸಿಕೊಂಡಿವೆ ಎಂದು ವರದಿಯಾಗಿವೆ. ಅಫ್ಘಾನಿಸ್ತಾನದೊಳಗೆ ಪಾಕಿಸ್ತಾನ ನಡೆಸಿದ ವೈಮಾನಿಕ ದಾಳಿಯ ಪ್ರತಿಯಾಗಿ ಅಫ್ಘಾನ್ ರಕ್ಷಣಾ ಸಚಿವಾಲಯ ಈ ಕಾರ್ಯಾಚರಣೆ ನಡೆಸಿದ್ದು, ಸತತ ೫ನೇ ದಿನವು ಗಡಿಯಲ್ಲಿ ಗುಂಡಿನ ಚಕಮಕಿ ಮುಂದುವರಿದಿದೆ. ಕಂದಹಾರ್ ಪ್ರಾಂತ್ಯದ ಸ್ಪಿನ್ ಬೋಲ್ಡಾಕ್ ಮತ್ತು

ಝೋರಾಬಾಕ್ ಜಿಲ್ಲೆಗಳಲ್ಲಿ ಪಾಕಿಸ್ತಾನದ ಹಲವು ಸೇನಾ ನೆಲೆಗಳನ್ನು ಅಫ್ಗಾನ್ ಪಡೆಗಳು ತಮ್ಮ ನಿಯಂತ್ರಣಕ್ಕೆ ಪಡೆದುಕೊಂಡಿವೆ ಎಂದು ಅಫ್ಗಾನ್ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದಾರೆ. ಸ್ಪೀನ್ ಬೋಲ್ಡಾಕ್‌ನಲ್ಲಿ ಮೂರು ನೆಲೆಗಳನ್ನು ವಶಪಡಿಸಿಕೊಳ್ಳಲಾಗಿದ್ದು, ಈ ವೇಳೆ ಪಾಕಿಸ್ತಾನದ ಮೂವರು ಸೈನಿಕರು ಮೃತಪಟ್ಟಿದ್ದಾರೆ ಮತ್ತು ಒಬ್ಬನನ್ನು ಸೆರೆಹಿಡಿಯಲಾಗಿದೆ ಎಂದು ಐಎಎನ್ಎಸ್ ಸುದ್ದಿಸಂಸ್ಥೆ ವರದಿ ಮಾಡಿದೆ. ಇದರ ಜೊತೆಗೆ ಪಾಕ್ತಿಕ ಪ್ರಾಂತ್ಯದಲ್ಲಿ ಅಫ್ಗಾನ್ ಭೂ ಪ್ರದೇಶದ ಮೇಲೆ ಗುಂಡಿನ ದಾಳಿ ನಡೆಸುತ್ತಿದ್ದ ಪಾಕಿಸ್ತಾನದ ಶಸ್ತ್ರ ಸಜ್ಜಿತ ಟ್ಯಾಂಕ್ ಒಂದನ್ನು ಧ್ವಂಸಗೊಳಿಸಲಾಗಿದೆ. ಇದುವರೆಗೆ ೧೦೦ಕ್ಕೂ ಹೆಚ್ಚು ಪಾಕಿಸ್ತಾನಿ ಸಿಬ್ಬಂದಿಯನ್ನು ಹತ್ಯೆಗೈಯಲಾಗಿದ್ದು, ೨೫ಕ್ಕೂ ಹೆಚ್ಚು ಸೇನಾ ನೆಲೆಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಅಫ್ಗಾನ್ ರಕ್ಷಣಾ ಸಚಿವಾಲಯದ ವಕ್ತಾರ ಇನಾಯುತುಲ್ಲಾ ಖೋವಾರಜ್ಮಿ ತಿಳಿಸಿದ್ದಾರೆ. ಉಭಯ ರಾಷ್ಟ್ರಗಳ ನಡುವಿನ ಉದ್ವಿಗ್ನತೆ ಮುಂದುವರೆದಿದ್ದು, ಗಡಿಯುದ್ದಕ್ಕೂ ಅಸ್ಥಿರತೆ ಉಂಟಾಗಿದೆ.

<>><><*><><<>

ಅಮೆರಿಕ-ಇಸ್ರೇಲ್ ಜಂಟಿ ದಾಳಿಯ ವೇಳೆ ಇರಾನ್ ಸರ್ವೋಚ್ಚ ನಾಯಕ ಹತರಾದ ಬಗ್ಗೆ ಕೇಂದ್ರ ಸರ್ಕಾರ ಮೌನ ವಹಿಸಿರುವುದನ್ನು ಕಾಂಗ್ರೆಸ್ ಸಂಸದೀಯ ಪಕ್ಷದ ಅಧ್ಯಕ್ಷ ಸೋನಿಯಾ ಗಾಂಧಿ ಟೀಕಿಸಿದ್ದಾರೆ. ಕೇಂದ್ರ ಸರ್ಕಾರದ ಮೌನ ತಟಸ್ಥ ನಡೆಯಲ್ಲ ಎಂದಿದ್ದಾರೆ. ಪತ್ರಿಕೆಯೊಂದರಲ್ಲಿ ಪ್ರಕಟವಾದ ತಮ್ಮ ಲೇಖನದಲ್ಲಿ ಈ ಕುರಿತು ವಿಸ್ತಾರವಾಗಿ ಬರೆದಿರುವ ಅವರು, ಮಾತುಕತೆಗಳು ನಡೆಯುತ್ತಿರುವಾಗಲೇ ರಾಷ್ಟ್ರದ ಮುಖ್ಯಸ್ಥರೊಬ್ಬರನ್ನು ಹತ್ಯೆ ಮಾಡಿರುವುದು ಅಂತಾರಾಷ್ಟ್ರೀಯ ಸಂಬಂಧಗಳಲ್ಲಿನ ಗಂಭೀರ ಬಿರುಕಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಭಾರತ ಸರ್ಕಾರವು ಇರಾನ್‌ನ ಸಾರ್ವಭೌಮತ್ವದ ಉಲ್ಲಂಘನೆಯನ್ನು ಖಂಡಿಸಲು ಹಿಂಜರಿಯುತ್ತಿದೆ ಎಂದಿದ್ದಾರೆ. ಇದೇ ಸಂದರ್ಭದಲ್ಲಿ ಇರಾನ್ ಮತ್ತು ಭಾರತದ ನಡುವಿನ ಹಳೆಯ ಸಂಬಂಧಗಳನ್ನು ಸ್ಮರಿಸಿರುವ ಅವರು, ೧೯೯೪ರಲ್ಲಿ ವಿಶ್ವಸಂಸ್ಥೆಯ ಮಾನವ ಹಕ್ಕುಗಳ ಆಯೋಗದಲ್ಲಿ ಕಾಶ್ಮೀರ ವಿಷಯದ ಕುರಿತು ಹಲವು ಸಂಸ್ಥೆಗಳು ಭಾರತದ ವಿರುದ್ಧ ನಿರ್ಣಯ ಮಂಡಿಸಲು ಮುಂದಾದಾಗ, ಇರಾನ್ ಭಾರತಕ್ಕೆ ಬೆಂಬಲವಾಗಿ ನಿಂತು ಅದನ್ನು ತಡೆದಿತ್ತು ಎಂಬ ಪ್ರಮುಖ ಅಂಶವನ್ನು ನೆನಪಿಸಿದ್ದಾರೆ.

<>><><*><><<>

ಪಶ್ಚಿಮ ಏಷ್ಯಾದಲ್ಲಿ ಉಲ್ಬಣಿಸಿರುವ ಉದ್ವಿಗ್ನತೆಯ ನಡುವೆ ವಿದೇಶಿ ಹಡಗುಗಳಲ್ಲಿ ಸೇವೆ ಸಲ್ಲಿಸುತ್ತಿದ್ದ ಮೂವರು ಭಾರತೀಯ ನಾವಿಕರು ಮೃತಪಟ್ಟಿದ್ದು, ಒಬ್ಬರು ಗಾಯಗೊಂಡಿದ್ದಾರೆ. ಹಡಗು ಸಾರಿಗೆ ಮಹಾನಿರ್ದೇಶನಾಲಯ ತಿಳಿಸಿದೆ. ಸಂತ್ರಸ್ಥ ನಾವೀಕರ ಸುರಕ್ಷತೆ, ಯೋಗಕ್ಷೇಮ ಮತ್ತು ಅವರ ಕುಟುಂಬಗಳಿಗೆ ಅಗತ್ಯ ಎಲ್ಲ ನೆರವು ಹಾಗೂ ಸೌಲಭ್ಯಗಳನ್ನು ಒದಗಿಸಲು ನಿರ್ದೇಶನಾಲಯ ವಿವಿಧ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸುತ್ತಿದೆ. ಈವರೆಗೆ ಭಾರತೀಯ ಹಡಗುಗಳಿಗೆ ಸಂಬಂಧಿಸಿದಂತೆ ಯಾವುದೇ ಸಾವು-ನೋವು ಅಥವಾ ಬಂಧನದಂತಹ

ಘಟನೆಗಳು ವರದಿಯಾಗಿಲ್ಲ. ಈ ಹಡಗುಗಳು ಪ್ರಸ್ತುತ ಇರುವ ಪ್ರದೇಶಗಳಲ್ಲಿ ಸುರಕ್ಷಿತವಾಗಿ ಕಾರ್ಯ ನಿರ್ವಹಿಸುತ್ತಿದ್ದು, ನಿರಂತರವಾಗಿ ಮೇಲ್ವಿಚಾರಣೆ ಮುಂದುವರಿದಿದೆ. ಸಂಘರ್ಷದ ಹಿನ್ನೆಲೆ ಪರ್ಷಿಯನ್ ಗಲ್ಫ್ ಪ್ರಾಂತ್ಯದಲ್ಲಿ ಸಿಲುಕಿರುವ ಭಾರತೀಯ ನಾವಿಕರ ತುರ್ತು ಸ್ಥಳಾಂತರ ಮತ್ತು ಸಹಾಯಕ್ಕಾಗಿ ಹಡಗು ಸಾರಿಗೆ ಮಹಾ ನಿರ್ದೇಶನಾಲಯ ತ್ವರಿತ ಪ್ರತಿಕ್ರಿಯಾ ತಂಡವನ್ನು ರಚಿಸಿದೆ.

**<>><><*><><<>**

ಪಶ್ಚಿಮ ಏಷ್ಯಾದಲ್ಲಿ ಉಲ್ಬಣಿಸಿರುವ ಸಂಘರ್ಷದ ಹಿನ್ನೆಲೆಯಲ್ಲಿ ಅಮೆರಿಕ ಅಧ್ಯಕ್ಷ ಡೋನಾಲ್ಡ್ ಟ್ರಂಪ್, ವಾಷಿಂಗ್ಟನ್ ಡಿಸಿಯಲ್ಲಿಂದು ಜರ್ಮನ್ ಚಾನ್ಸೆಲರ್ ಫ್ರೆಡ್ರಿಕ್ ಮೆರ್ಜ್ ಅವರೊಂದಿಗೆ ಮಹತ್ವದ ಮಾತುಕತೆ ನಡೆಸಲಿದ್ದಾರೆ. ಈ ಉನ್ನತಮಟ್ಟದ ಭೇಟಿಯ ನಂತರ ಉಭಯ ನಾಯಕರು ಓವಲ್ ಕಚೇರಿಯಲ್ಲಿ ದ್ವಿಪಕ್ಷೀಯ ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ.

**<>><><*><><<>**

ಇರಾನ್ ಯುದ್ಧದ ಜಾಗತಿಕ-ಆರ್ಥಿಕ ಪರಿಣಾಮದ ಬಗ್ಗೆ ವಿಶ್ವಸಂಸ್ಥೆ ಕಳವಳ ವ್ಯಕ್ತಪಡಿಸಿದ್ದು, ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರಸ್ ಗಲ್ಫ್ ಪ್ರದೇಶದ ನಾಯಕರೊಂದಿಗೆ ಒಂದು ಸುತ್ತಿನ ರಾಜತಾಂತ್ರಿಕ ಮಾತುಕತೆ ನಡೆಸಿದ್ದಾರೆ.

**<>><><*><><<>**

ಪಶ್ಚಿಮ ಏಷ್ಯಾದಲ್ಲಿ ಸಂಭವಿಸಿರುವ ಬಿಕ್ಕಟ್ಟಿನ ಕುರಿತು ಕೌನ್ಸುಲರ್ ವ್ಯವಹಾರಗಳು ನಾಗರಿಕ ಸುರಕ್ಷತಾ ಮತ್ತು ರಾಜತಾಂತ್ರಿಕ ಭದ್ರತಾ ಕ್ಷೇತ್ರದ ತಜ್ಞರನ್ನು ಒಟ್ಟುಗೂಡಿಸುವ ಮೂಲಕ ಅಮೆರಿಕ ದಿನದ ೨೪ ಗಂಟೆ ಕಾರ್ಯನಿರ್ವಹಿಸುವ ಅಂತರ್ ಸಂಸ್ಥೆ ಕಾರ್ಯಪಡೆಯನ್ನು ಸಕ್ರಿಯಗೊಳಿಸಿದೆ.

**<>><><*><><<>**

ಪೌರತ್ವ ತಿದ್ದುಪಡಿ ಕಾಯ್ದೆ ಸಿಎಎ ಅಡಿಯಲ್ಲಿ ಭಾರತೀಯ ಪೌರತ್ವ ಕೋರಿ ಸಲ್ಲಿಕೆಯಾಗಿರುವ ಅರ್ಜಿಗಳನ್ನು ತ್ವರಿತವಾಗಿ ವಿಲೇವಾರಿ ಮಾಡಲು ಕೇಂದ್ರ ಸರ್ಕಾರ ಪಶ್ಚಿಮ ಬಂಗಾಳದಲ್ಲಿ ಎರಡು ಸಬಲೀಕರಣ ಸಮಿತಿಗಳನ್ನು ರಚಿಸಿದೆ. ಈ ಕುರಿತು ಗೃಹ ಸಚಿವಾಲಯ ಗೆಜೆಟ್ ಅಧಿಸೂಚನೆ ಹೊರಡಿಸಿದ್ದು, ದೊಡ್ಡ ಸಂಖ್ಯೆಯಲ್ಲಿ ಬರುತ್ತಿರುವ ಅರ್ಜಿಗಳನ್ನು ಶೀಘ್ರವಾಗಿ ಪ್ರಕ್ರಿಯೆಗೊಳಿಸಲು ಈ ನಿರ್ಧಾರ ಕೈಗೊಳ್ಳಲಾಗಿದೆ. ಸಿಎಎ ಕಾಯ್ದೆಯು ಪಾಕಿಸ್ತಾನ, ಅಫ್ಘಾನಿಸ್ತಾನ ಮತ್ತು ಬಾಂಗ್ಲಾದೇಶದಿಂದ ಧಾರ್ಮಿಕ ಕಿರುಕುಳದ ಆತಂಕದಿಂದ ೨೦೧೪ರ ಡಿಸೆಂಬರ್ ೩೧ಕ್ಕಿಂತ ಮೊದಲು ಭಾರತಕ್ಕೆ ಬಂದಿರುವ ಹಿಂದೂ, ಸಿಖ್, ಕ್ರಿಶ್ಚಿಯನ್, ಬೌದ್ಧ, ಜೈನ್ ಮತ್ತು ಪಾರ್ಸಿ ಸಮುದಾಯಗಳ ವಲಸಿಗರಿಗೆ ಭಾರತೀಯ ಪೌರತ್ವವನ್ನು ನೀಡಲು ಅವಕಾಶ ಕಲ್ಪಿಸುತ್ತದೆ.

<>><><*><><<>

ಇಂದು ವಿಶ್ವ ವನ್ಯಜೀವಿ ದಿನ. ಈ ಹಿನ್ನೆಲೆ ಸಾಮಾಜಿಕ ಮಾಧ್ಯಮ ಸಂದೇಶ ಹಂಚಿಕೊಂಡಿರುವ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಈ ದಿನ ನಮ್ಮ ಭೂಮಿಯ ಅಸ್ತಿತ್ವಕ್ಕೆ ಆಧಾರವಾಗಿರುವ ವನ್ಯಜೀವಿ ಮತ್ತು ಸಸ್ಯ ಸಂಕುಲದ ವೈವಿಧ್ಯತೆಯನ್ನು ಸಂಭ್ರಮಿಸುವ ದಿನವಾಗಿದೆ ಎಂದಿದ್ದಾರೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧.೨೦ ಕ್ಕೆ ><><<>**